## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ನರಸಿಂಗರಾವ್ ಸಾಲೇಕರ್, ಕೃಷಿ ಅಧಿಕಾರಿ, ರೈತ ಸಂಪರ್ಕ ಕೇಂದ್ರ, ಆಳಂದ ತಾಲ್ಲೂಕು, ಗುಲಬರ್ಗಾ ಜಿಲ್ಲೆ, ಇವರ ವಿರುದ್ದ ಶಿಸ್ತು ಕ್ರಮ ಕೈಗೊಳ್ಳಲು ಲೋಕಾಯುಕ್ತಕ್ಕೆ ವಹಿಸುವ ಕುರಿತು.

**ಓದಲಾಗಿದೆ:-**

1) ಅಪರ ನಿಂಬಂಧಕರು, ವಿಚಾರಣೆಗಳು-05 ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಅ.ಸ.ಪತ್ರ ಸಂ. ಕಂಪ್ಲೇಂಟ್ /ಉಪಲೋಕ್/ಜಿಎಲ್‌ಬಿ-8686 /2011/ಎಆರ್‌ಇ-06, ದಿನಾಂಕ:23-01-2014
2) ಉಪ ಲೋಕಾಯುಕ್ತರ ವರದಿ ಸಂ.ಕಂಪ್ಲೇಂಟ್ /ಉಪಲೋಕ್/ಜಿಎಲ್‌ಬಿ-8686/2011/ ಎಆರ್‌ಇ-6, ದಿನಾಂಕ:12-09-2013.

**ಪ್ರಸ್ತಾವನೆ:-**

ಮೇಲೆ ಕ್ರಮ ಸಂಖ್ಯೆ(1)ರಲ್ಲಿ ಓದಲಾದ ಅರೆ ಸರ್ಕಾರಿ ಪತ್ರದಲ್ಲಿ ಅಪರ ನಿಂಬಂಧಕರು, ವಿಚಾರಣೆಗಳು-06, ಕರ್ನಾಟಕ ಲೋಕಾಯುಕ್ತ ಇವರು ಶ್ರೀ ನರಸಿಂಗರಾವ್ ಸಾಲೇಕರ್ ಕೃಷಿ ಅಧಿಕಾರಿ ರೈತ ಸಂಪರ್ಕ ಕೇಂದ್ರ, ಆಳಂದ ತಾಲ್ಲೂಕು, ಗುಲಬರ್ಗಾ ಜಿಲ್ಲೆ, ಇವರು ಆಳಂದ ತಾಲ್ಲೂಕಿನ ಕೆರೂರ ಗ್ರಾಮದ ಸರ್ವೆ ನಂ.70ರ ಜಮೀನಿನಲ್ಲಿ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಸಸಿ ನೆಡುವ ಕಾಮಗಾರಿ ಕೆಲಸವು ಮಂಜೂರಾತಿಯಾಗಿದ್ದು, ಆದರೆ ಆ ಜಮೀನಿನಲ್ಲಿ ಯಾವುದೇ ಸಸಿಗಳನ್ನು ನೆಡದೆ ಬೋಗಸ್ ಬಿಲ್ ಸೃಷ್ಟಿಸಿ ಸರ್ಕಾರಿ ಹಣವನ್ನು ಲಪಟಾಯಿಸಿರುತ್ತಾರೆಂದು ಶ್ರೀ ಪ್ರಕಾಶ್ ತಂದೆ ಮಲ್ಲಿಕಾರ್ಜುನ ಸುಳ್ಳದ ಇವರು ಲೋಕಾಯುಕ್ತ ಪೊಲೀಸಿನವರಿಗೆ ನೀಡಿದ ದೂರಿನ ಮೇರೆಗೆ ಕರ್ನಾಟಕ ಲೋಕಾಯುಕ್ತದ ತನಿಖಾಧಿಕಾರಿಯವರು ಕೈಗೊಂಡ ತನಿಖೆಯಲ್ಲಿ ದೂರುದಾರರ ಜಮೀನಿನಲ್ಲಿ ಯಾವುದೇ ಸಸಿಗಳನ್ನು ನೆಡದೆ ಬೋಗಸ್ ಬಿಲ್ ಸೃಷ್ಟಿಸಿ ಸರ್ಕಾರಿ ಹಣವನ್ನು ಲಪಟಾಯಿಸಿರುವುದು ಮೇಲ್ನೋಟಕ್ಕೆ ಕಂಡು ಬಂದಿರುತ್ತದೆ ಎಂಬುದಾಗಿ ವರದಿ ಮಾಡಿರುತ್ತಾರೆ. ಮತ್ತು ಸದರಿ ಅಧಿಕಾರಿಯವರು ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಾವಳಿ 1966ರಂತೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದರಿಂದ ಸದರಿಯವರ ವಿರುದ್ದ ಶಿಸ್ತು ಕ್ರಮ ಕೈಗೊಳ್ಳಲು ಉದ್ದೇಶಿಸಿ, ಆರೋಪಿತ ಅಧಿಕಾರಿಯವರಿಗೆ ಸೂಚನಾ ಪತ್ರ ಜಾರಿ ಮಾಡಲಾಗಿದ್ದು, ಅದಕ್ಕೆ ಅವರು ನೀಡಿದ ಹೇಳಿಕೆ ತೃಪ್ತಿಕರವಾಗಿರದಿರುವುದರಿಂದ ಸದರಿಯವರನ್ನು ಕರ್ನಾಟಕ ನಾಗರೀಕ ಸೇವಾ (ಸಿ.ಸಿ.ಎ.) ನಿಯಮಾವಳಿ 1957ರಡಿ ಶಿಸ್ತು ಕ್ರಮ ಜರುಗಿಸಲು ಪ್ರಕರಣವನ್ನು ಅದೇ ನಿಯಮಾವಳಿ ನಿಯಮ 14(ಎ) ರನ್ವಯ ತಮಗೆ ಒಪ್ಪಿಸುವಂತೆ ಮಾನ್ಯ ಉಪ ಲೋಕಾಯುಕ್ತರು ಕೋರಿರುತ್ತಾರೆ.

ಶ್ರೀ ನರಸಿಂಗರಾವ್ ಸಾಲೇಕರ್ ಕೃಷಿ ಅಧಿಕಾರಿ ರೈತ ಸಂಪರ್ಕ ಕೇಂದ್ರ, ಆಳಂದ ತಾಲ್ಲೂಕು, ಗುಲಬರ್ಗಾ ಜಿಲ್ಲೆ, ಇವರು ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಾವಳಿ 1966ರ ನಿಯಮ 3(1)ರ ಪ್ರಕಾರ ತಪ್ಪೆಸಗಿದ್ದಾರೆಂಬುದು ಮೇಲ್ನೋಟಕ್ಕೆ (prima-facie) ಕಂಡು ಬಂದಿದ್ದರಿಂದ ಅವರ ವಿರುದ್ದ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ಪ್ರಕಾರ

ಇಲಾಖಾ ವಿಚಾರಣೆ ಆಯೋಜಿಸಲು ಪ್ರಕರಣವನ್ನು ಅದೇ ನಿಯಮಾವಳಿ ನಿಯಮ 14-ಎ ಪ್ರಕಾರ ಮಾನ್ಯ ಉಪ ಲೋಕಾಯುಕ್ತ-1 ರವರಿಗೆ ವಹಿಸಲು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 05 ಕೃಪವಿ 2014**
**ಬೆಂಗಳೂರು, ದಿನಾಂಕ:03-03-2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ನರಸಿಂಗರಾವ್ ಸಾಲೇಕರ್ ಕೃಷಿ ಅಧಿಕಾರಿ ರೈತ ಸಂಪರ್ಕ ಕೇಂದ್ರ, ಆಳಂದ ತಾಲ್ಲೂಕು, ಗುಲಬರ್ಗಾ ಜಿಲ್ಲೆ, ಇವರು, ಆಳಂದ ತಾಲ್ಲೂಕಿನ ಕೆರೂರ ಗ್ರಾಮದ ಸರ್ವೆ ನಂ.70ರ ಜಮೀನಿನಲ್ಲಿ, ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಸಸಿ ನೆಡುವ ಕಾಮಗಾರಿ ಕೆಲಸದಲ್ಲಿ ಅವ್ಯವಹಾರ ಎಸಗಿ ಸರ್ಕಾರಿ ಹಣವನ್ನು ಲಪಟಾಯಿಸಿರುತ್ತಾರೆಂಬ ಆರೋಪಕ್ಕೆ ಸಂಬಂಧಿಸಿದಂತೆ ಸದರಿಯವರ ವಿರುದ್ಧ ಕರ್ನಾಟಕ ನಾಗರಿಕ ಸೇವಾ (ಸಿ.ಸಿ.ಎ) ನಿಯಮಾವಳಿ 1957ರ ನಿಯಮದಡಿ, ಇಲಾಖಾ ವಿಚಾರಣಾ ಕ್ರಮವನ್ನು ಆಯೋಜಿಸಲು ಅದೇ ನಿಯಮಾವಳಿ ನಿಯಮ 14(ಎ)ರನ್ವಯ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ-1 ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು, (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ ಜಿಇ-05) ಕರ್ನಾಟಕ, ಬೆಂಗಳೂರು.
2. ಗೌರವಾನ್ವಿತ ಉಪ ಲೋಕಾಯುಕ್ತರು-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು ವಿಚಾರಣೆಗಳು-06 ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಆಯುಕ್ತರು, ಕೃಷಿ ಇಲಾಖೆ, ~~ಶೇಷಾದ್ರಿ ರಸ್ತೆ, ಬೆಂಗಳೂರು.~~
5. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು.
6. ಜಂಟಿ ಕೃಷಿ ನಿರ್ದೇಶಕರು, ಗುಲ್ಬರ್ಗಾ ಜಿಲ್ಲೆ.
7. ಸಹಾಯಕ ಕೃಷಿ ನಿರ್ದೇಶಕರು, ಆಳಂದ ತಾಲ್ಲೂಕು, ಗುಲ್ಬರ್ಗಾ ಜಿಲ್ಲೆ.
8. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿ-1, ಕೃಷಿ ಇಲಾಖೆರವರಿಗೆ.
11. ಅಧೀನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ (ಸೇವೆಗಳು)
12. ಅಧೀನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ (ಸೇವೆಗಳು)
13. ಸಮನ್ವಯಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.